## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಸಂಖ್ಯೆ : 245 (300)
ಸದಸ್ಯರ ಹೆಸರು : ಶ್ರೀ ವಿಜಯ ಸಿಂಗ್
ಉತ್ತರಿಸುವ ದಿನಾಂಕ : 04.03.2020
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು

| ಕ್ರ. ಸಂ | ವಿಷಯ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು) | ಹೌದು<br>ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸಲಾಗುತ್ತಿರುವ ವಸತಿ ಶಾಲೆಗಳಿಗೆ ಅಗತ್ಯವಿರುವ ಕನಿಷ್ಠ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ. ಮುಂದುವರೆದು, ಈ ಕೆಳಕಂಡ ಪೂರಕ ಸೌಲಭ್ಯಗಳನ್ನು ಸಹ ಒದಗಿಸಲು ಕ್ರಮವಹಿಸಲಾಗುತ್ತಿದೆ.<br>1. ವಸತಿ ಶಾಲೆಗಳಿಗೆ ಡೈನಿಂಗ್ ಟೇಬಲ್‌ಗಳ ಪೂರೈಕೆಗೆ ಕಾರ್ಯಾದೇಶ ನೀಡಲಾಗಿದ್ದು, ಪೂರೈಕೆ ಪ್ರಕ್ರಿಯೆಯಲ್ಲಿರುತ್ತದೆ.<br>2. ಪ್ರತಿ ವಸತಿ ಶಾಲೆಗೆ ತಲಾ ರೂ.3.00 ಲಕ್ಷಗಳನ್ನು ತಕ್ಷಣ ಅಗತ್ಯವಿರುವ ಮೂಲಭೂತ ಸೌಕರ್ಯಗಳ ಪೂರೈಕೆಗೆ ಸ್ಥಳೀಯವಾಗಿ ಖರೀದಿಸಲು ಬಿಡುಗಡೆ ಮಾಡಲಾಗಿದೆ.<br>3. ಬೇಡಿಕೆ ಇರುವ ವಸತಿ ಶಾಲೆಗಳಿಗೆ ಪೀಠೋಪಕರಣಗಳ ಪೂರೈಕೆಗೆ ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br>4. ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಸಮವಸ್ತ್ರ, ಲೇಖನ ಸಾಮಗ್ರಿ, ಶುಚಿ ಸಂಭ್ರಮ ಕಿಟ್ ಹಾಗೂ ಶೂ, ಸಾಕ್ಸ್, ಟೈ, ಪೂರೈಕೆ ಮಾಡಲಾಗಿದೆ.<br>5. ಅಗತ್ಯ ಇರುವ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ. |

ಸಕಇ 72 ಮೊದೇಶಾ 2020

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು